ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ಅಧಿಕ ರಸಗೊಬ್ಬರ ಮತ್ತು ಕೀಟನಾಶಕಗಳ ಬಳಕೆಯಿಂದ ದುಷ್ಪರಿಣಾಮಗಳ ಬಗ್ಗೆ

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

445 (474) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಧಿಕ ಇಳುವರಿ ಪಡೆಯುವ ಉದ್ದೇಶದಿಂದ ರೈತರು ಅಧಿಕಪ್ರಮಾಣದಲ್ಲಿ ಕೀಟನಾಶಕ ಮತ್ತು ರಸಗೊಬ್ಬರಗಳನ್ನು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಧಿಕ ಪ್ರಮಾಣದಲ್ಲಿ ರಸಗೊಬ್ಬರ ಮತ್ತು ಕ್ರಿಮಿನಾಶಕಗಳನ್ನು ಬಳಕೆ ಮಾಡುತ್ತಿರುವುದರಿಂದ ಜನರ ಆರೋಗ್ಯದ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳು ಯಾವುವು ; ಇದು ಸರ್ಕಾರದ ಅರಿವಿಗೆ ಬಂದಿದೆಯೇ ;

(ಇ) ಜನರ ಆರೋಗ್ಯದ ರಕ್ಷಣೆಯ ದೃಷ್ಟಿಯಿಂದ ರಸಗೊಬ್ಬರ ಮತ್ತು ಕ್ರಿಮಿನಾಶಕಗಳ ಬಳಕೆಯ ಬಗ್ಗೆ ರೈತರಿಗೆ ತಿಳುವಳಿಕೆಯನ್ನುಂಟು ಮಾಡುವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದೆಯೇ ?